**9 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,**
**ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.**

**ಎಸ್.ಸಿ.ನಂ.137/2020**

(ಚಾ.ಸಾ.14/ಪ್ರಾ.ಸಾ.7)

ತಾಃ 22.07.2025 ರಂದು ಸಾಕ್ಷಿಗೆ ಪ್ರಮಾಣ ವಚನ ಮಾಡಿಸಲಾಯಿತು.

| | |
|---|---|
| ಸಾಕ್ಷಿದಾರರ ಹೆಸರು: | ಅರುಣ್ ಕುಮಾರ್ |
| ತಂದೆಯ ಹೆಸರು | ಶಿವಲಿಂಗಯ್ಯ |
| ವಯಸ್ಸು | 47 ವರ್ಷ |
| ಉದ್ಯೋಗ | ಖಾಸಗಿ ಕೆಲಸ |
| ವಾಸ ಸ್ಥಳ | ಹೆರೋಹಳ್ಳಿ, ಬೆಂಗಳೂರು ಉತ್ತರ ತಾಲ್ಲೂಕು |

**ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ**

ದಿಃ14.03.2020 ರಂದು ಸಂಜೆ 4.00 ಗಂಟೆಗೆ ಮಂಜುನಾಥ ಎಂಬುವವರು ತಮ್ಮ ದ್ವಿಚಕ್ರ ವಾಹನವನ್ನು ಬಿಡಿಸಿಕೊಳ್ಳುವ ಸಲುವಾಗಿ ಪೊಲೀಸ್ ಠಾಣೆಗೆ ನನ್ನನ್ನು ಕರೆದುಕೊಂಡು ಹೋಗಿದ್ದರು. ಪೊಲೀಸರು ಪಂಚನಾಮೆ ಮಾಡಿ ನನ್ನ ಸಹಿ ಪಡೆದು ದ್ವಿಚಕ್ರ ವಾಹನವನ್ನು ಮಂಜುನಾಥ ರವರಿಗೆ ಕೊಟ್ಟಿರುತ್ತಾರೆ. ಈಗ ತೋರಿಸಿದ ಪಂಚನಾಮೆಯಲ್ಲಿ ನನ್ನ ಸಹಿ ಇದೆ. ಪಂಚನಾಮೆಯನ್ನು ನಿ.ಪಿ.17 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ.17(ಎ) ಎಂದು ಗುರುತಿಸಲಾಯಿತು. ಆ ದ್ವಿಚಕ್ರ ವಾಹನದ ಸಂಖ್ಯೆ ಕೆಎ-

ಎಸ್.ಸಿ.ನಂ.137/2020
ಚಾ.ಸಾ.14/ಪ್ರಾ.ಸಾ.7

02/5406 ಆಗಿತ್ತು.

(ಈ ಹಂತದಲ್ಲಿ ಸಾಕ್ಷಿಯನ್ನು ಸರ್ಕಾರಿ ಅಭಿಯೋಜಕರು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದಾರೆ. ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ**

2. ಆರೋಪಿಗಳು ಸದರಿ ದ್ವಿಚಕ್ರ ವಾಹನವನ್ನು ಕೃತ್ಯಕ್ಕೆ ಬಳಸಿದ್ದು ಆರೋಪಿ ಮನೋಹರ ಅವರ ತಂದೆ ಮಂಜುನಾಥರವರು ಆ ದ್ವಿಚಕ್ರ ವಾಹನವನ್ನು ತಂದು ಪೊಲೀಸರಿಗೆ ಹಾಜರುಪಡಿಸಿದ ಮೇರೆಗೆ ನಿ.ಪಿ.17 ರ ಪಂಚನಾಮೆಯಲ್ಲಿ ಆ ದ್ವಿಚಕ್ರ ವಾಹನವನ್ನು ಜಪ್ತಿಪಡಿಸಿ ಮಹಜರ್ ಅನ್ನು ಓದಿ ಹೇಳಿ ನನ್ನ ಸಹಿ ಪಡೆದಿದ್ದಾರೆ ಎಂದರೆ ಸುಳ್ಳು. ಈ ಮೇಲ್ಕಂಡಂತೆ ನಾನು ಪೊಲೀಸರಿಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು ನಿ.ಪಿ.18 ಎಂದು ಗುರುತಿಸಲಾಯಿತು. ನಿ.ಪಿ.17 ರ ಪಂಚನಾಮೆಯ ವಿಚಾರಗಳು ಮತ್ತು ನಿ.ಪಿ.18 ರಂತೆ ಹೇಳಿಕೆ ನೀಡಿದ್ದರೂ ಸಹ ಈಗ ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿಗಳ ಪರ ವಕೀಲರಿಂದಃಏನು ಇಲ್ಲ.**

(ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಿದೆ.)

ಓ. ಹೇ. ಕೇ. ಸ. ಸಹಿ ಮಾಡಿದ್ದಾರೆ.

(ವಿಜಯ್ ಕುಮಾರ್)
9 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು.